# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಿನಾಂಕ:02.01.2021 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ.17 (ಜೆ ಪಿ ಪಾರ್ಕ್) ರಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

**ಹಾಜರಿದ್ದವರು:-**

| ಕ್ರಮ ಸಂಖ್ಯೆ | ಅಧ್ಯಕ್ಷರು / ಸದಸ್ಯರ ಹೆಸರು | ಪದನಾಮ / ಇಲಾಖೆ | ಹಾಜರಿದ್ದರು |
|---|---|---|---|
| 1 | ಶ್ರೀ ಎ. ಬಿ. ದೊಡ್ಡಯ್ಯ | ವಾರ್ಡ್ ನೋಡಲ್ ಅಧಿಕಾರಿಗಳು | |
| 2 | ಶ್ರೀ ಅಜಗಣ್ಣಯ್ಯ ಸ್ವಾಮಿ | ಸಹಾಯಕ ಅಭಿಯಂತರರು | ಹಾಜರಿದ್ದರು |
| 3 | ಡಾ|| ಚೇತನ್ | ವೈದ್ಯಾಧಿಕಾರಿಗಳು | ಹಾಜರಿದ್ದರು |
| 4 | ಶ್ರೀ ರಮೇಶ್ | ಹಿ. ಆ. ಪ. | ಹಾಜರಿದ್ದರು |
| 5 | ಶ್ರೀ ಸೋಮಶೇಖರ್ ಎಸ್. | ಕಿ. ಆ. ಪ. | ಹಾಜರಿದ್ದರು |
| 6 | ಶ್ರೀ ರಾಜಶೇಖರ್ | ಬೆಸ್ಕಾಂ | ಹಾಜರಿದ್ದರು |
| 7 | ಶ್ರೀ ರಂಗರಾಜು | ಬೆಸ್ಕಾಂ | ಹಾಜರಿದ್ದರು |
| 8 | ಶ್ರೀ ಅವಿನಾಶ್ | ಬಿ.ಡಬ್ಲ್ಯೂ.ಎಸ್.ಎಸ್.ಬಿ. | ಹಾಜರಿದ್ದರು |
| 9 | ಶ್ರೀ ಆಶೀರ್ವಾದ | 17/ಬಿ, ಮೇಲ್ವಿಚಾರಕರು | ಹಾಜರಿದ್ದರು |
| 10 | ಶ್ರೀ ಎಂ. ಸಿ. ವಿಲ್ಸನ್ | ಮೇಲ್ವಿಚಾರಕರು | ಹಾಜರಿದ್ದರು |
| 11 | ಶ್ರೀ ವೆಂಕಟೇಶ್ | ಮೇಲ್ವಿಚಾರಕರು | ಹಾಜರಿದ್ದರು |
| 12 | ಬಸವರಾಜು | ವಾರ್ಡ್-17/ಸಿ ಮೇಲ್ವಿಚಾರಕರು | ಹಾಜರಿದ್ದರು |
| 13 | ಶ್ರೀ ಮುರಳಿ | ಮೇಲ್ವಿಚಾರಕರು | ಹಾಜರಿದ್ದರು |
| 14 | ನಾಗೇಗೌಡ | ಮೇಲ್ವಿಚಾರಕರು | ಹಾಜರಿದ್ದರು |
| 15 | ಅಲಿಸ್ಟರ್ | ಮೇಲ್ವಿಚಾರಕರು | ಹಾಜರಿದ್ದರು |
| 16 | ನವೀನ್ ಡಿ. ಎನ್. | ಮಾರ್ಷಲ್ | ಹಾಜರಿದ್ದರು |
| 17 | ಹಾಗೂ ಇತರೆ ಸಾರ್ವಜನಿಕರು ಹಾಜರಿದ್ದರು | | |

ಮಾನ್ಯ ಅಧ್ಯಕ್ಷರ ಸ್ವಾಗತದೊಂದಿಗೆ ಅಧಿಕಾರಿಗಳು / ಹಾಜರಿದ್ದವರ ಪರಸ್ಪರ ಪರಿಚಯದೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

Scanned with CamScanner

**1. ಕಾಮಗಾರಿ ಹಾಗೂ ಬಿಡಬ್ಲ್ಯೂಎಸ್‌ಎಸ್‌ಬಿ ಇಲಾಖೆ:-**

ಬಂಡಪ್ಪ ಗಾರ್ಡನ್, 18ನೇ ಮುಖ್ಯರಸ್ತೆಯಲ್ಲಿರುವ ಮ್ಯಾನ್‌ಹೋಲ್ ಬ್ಲಾಕ್ ಆಗಿ, ಒಳಚರಂಡಿ ನೀರು ರಸ್ತೆಗೆ ಹರಿದು ಬರುತ್ತಿದ್ದು, ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ ಹಾಗೂ ಅದೇ ರಸ್ತೆಯಲ್ಲಿನ ಕೆಲವೊಂದು ಭಾಗಗಳಲ್ಲಿ ಚರಂಡಿಯ ಮುಚ್ಚುಗಲ್ಲುಗಳು ಒಡೆದುಹೋಗಿದ್ದು, ತೆರೆದ ಚರಂಡಿಯಿಂದ ಸೊಳ್ಳೆಗಳು ಜಾಸ್ತಿಯಾಗಿರುತ್ತದೆ ಎಂದು ಸಾರ್ವಜನಿಕರು ದೂರು ನೀಡಿರುತ್ತಾರೆ. ಆದ್ದರಿಂದ ಸಂಬಂಧಪಟ್ಟ ಬಿಡಬ್ಲ್ಯೂಎಸ್‌ಎಸ್‌ಬಿ ಹಾಗೂ ಕಾಮಗಾರಿ ಸಹಾಯಕ ಅಭಿಯಂತರರಿಗೆ ಈ ಸಮಸ್ಯೆಗಳನ್ನು ಈ ಕೂಡಲೇ ಬಗೆಹರಿಸಬೇಕೆಂದು ಅಧ್ಯಕ್ಷರು ದೂರವಾಣಿ ಮುಖೇನ ಸೂಚಿಸಿದರು.

**2. ಕಾಮಗಾರಿ ಇಲಾಖೆ:**

ಧ್ಯಾನ ಮಂದಿರದ ಹತ್ತಿರವಿರುವ ಲಾರಿ ಪಾಯಿಂಟ್‌ನಲ್ಲಿ ಕಟ್ಟಡದ ಭಗ್ನಾವಶೇಷಗಳು ಜಾಸ್ತಿಯಿದ್ದು, ಇದರಿಂದಾಗಿ ಕಸದ ಲಾರಿಗಳು ಮತ್ತು ಆಟೋಗಳನ್ನು ನಿಲ್ಲಿಸಲು ತೊಂದರೆಯಾಗುತ್ತಿದ್ದು, ಅದನ್ನು ತೆರವುಗೊಳಸುವಂತೆ ಕಿರಿಯ ಆರೋಗ್ಯ ಪರಿವೀಕ್ಷಕರು ಅಧ್ಯಕ್ಷರಿಗೆ ಮನವಿ ಮಾಡಿದ್ದು, ಈ ವಿಷಯದ ಬಗ್ಗೆ ವಾರ್ಡ್ ಸಹಾಯಕ ಅಭಿಯಂತರರು ಮಾತನಾಡಿ, ಮುಂದಿನ ದಿನಗಳಲ್ಲಿ ಕಟ್ಟಡದ ಭಗ್ನಾವಶೇಷಗಳನ್ನು ತೆರವುಗೊಳಸುವುದಾಗಿ ತಿಳಸಿದರು.

**3. ಬಿಡಬ್ಲ್ಯೂಎಸ್‌ಎಸ್‌ಬಿ ಇಲಾಖೆ:-**

1ನೇ ಅಡ್ಡರಸ್ತೆ, ಎಸ್.ಬಿ.ಎಂ. ಕಾಲೋನಿಯಲ್ಲಿ ಕುಡಯುವ ನೀರಿನ Volve (ವಾಲ್ವ್) ನಲ್ಲಿ ನೀರು ಸೋರಿಕೆಯಾಗುತ್ತಿದ್ದು, ಇದರಿಂದಾಗಿ ನೀರು ಪೋಲಾಗುತ್ತಿರುತ್ತದೆ. ಹಾಗೂ ಚೌಡೇಶ್ವರಿ ಬಸ್ ನಿಲ್ದಾಣದ ಹತ್ತಿರದ ಸರ್ವಿಸ್ ರಸ್ತೆಯಲ್ಲಿ ಪದೇ ಪದೇ ಮ್ಯಾನ್‌ಹೋಲ್ ಬ್ಲಾಕ್ ಸಮಸ್ಯೆ ಕಂಡುಬರುತ್ತಿದ್ದು, ಸಾರ್ವಜನಿಕರಿಗೆ ತೊಂದರೆಯಾಗುತ್ತಿರುತ್ತದೆ. ಆದ್ದರಿಂದ ಸಂಬಂಧಪಟ್ಟ ಬಿಡಬ್ಲ್ಯೂಎಸ್‌ಎಸ್‌ಬಿ ಸಹಾಯಕ ಅಭಿಯಂತರರು ಸೂಕ್ತ ಕ್ರಮ ಕೈಗೊಂಡು ಸಮಸ್ಯೆಗಳನ್ನು ಸರಿಪಡಿಸಬೇಕೆಂದು ಅಧ್ಯಕ್ಷರು ದೂರವಾಣಿ ಮುಖೇನ ಸೂಚಿಸಿದರು.

Scanned with CamScanner

**೫) ಮಾಸ್ಕ್ ಹಾಕದಿರುವ ವ್ಯಕ್ತಿಗಳಿಗೆ ದಂಡ ವಿಧಿಸುವ ಬಗ್ಗೆ:-**

ಪ್ರಸ್ತಾಪಿತ ವಿಷಯದ ಬಗ್ಗೆ ಮಾರ್ಷಲ್‌ಗಳೊಂದಿಗೆ ಚರ್ಚಿಸಲಾಗಿದ್ದು, ವಿದೇಶಗಳಲ್ಲಿ ಕೊರೋನಾ ರೂಪಾಂತರ ಹೊಂದಿರುವ ಬಗ್ಗೆ ವರದಿಯಾಗಿದ್ದು, ಮುಂಜಾಗ್ರತಾ ಕ್ರಮವಾಗಿ ವಾರ್ಡ್‌ಲ್ಲಿ ಮಾಸ್ಕ್ ಹಾಕದಿರುವ ಸಾರ್ವಜನಿಕರಿಗೆ ಸರ್ಕಾರದ ಆದೇಶದ ರೀತ್ಯಾ ಕಟ್ಟುನಿಟ್ಟಾಗಿ ದಂಡ ವಿಧಿಸಲು ಸೂಚಿಸಲಾಯಿತು.

ಕೊನೆಯದಾಗಿ ಅಧ್ಯಕ್ಷರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರ ಸಮಸ್ಯೆ / ದೂರುಗಳನ್ನು ದಾಖಲಿಸಲು ವಾರ್ಡ್‌ನಲ್ಲಿ ದೂರು ದಾಖಲಿಸುವ ಪುಸ್ತಕ ಲಭ್ಯವಿರುವಂತೆ ನೋಡಿಕೊಂಡು ಬರುವ ದೂರುಗಳನ್ನು ಆದ್ಯತೆಯ ಮೇರೆಗೆ ಕ್ರಮವಹಿಸುವಂತೆ ಹಾಗೂ ಪ್ರತಿ ವಾರ ಸಾಮೂಹಿಕ ಸ್ವಚ್ಛತಾ ಕಾರ್ಯಕ್ರಮವನ್ನು ಮುಂದುವರೆಸುಂತೆ ಸೂಚಿಸುತ್ತಾ, ಸಕಾಲದಲ್ಲಿ ಸಾರ್ವಜನಿಕ ಕುಂದುಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ಕೈಗೊಂಡು ಇಲಾಖೆಗಳು ಸಮನ್ವಯತೆಯಿಂದ ಕೆಲಸ ನಿರ್ವಹಿಸಲು ಸೂಚಿಸಿದರು.

ಮೇಲ್ಕಂಡ ಸಮಸ್ಯೆಗಳ ಬಗ್ಗೆ ಸುಧೀರ್ಘವಾಗಿ ಚರ್ಚಿಸಿ, ಕಾರ್ಯದರ್ಶಿಯವರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| 06/01/2021 | 11/01/2021 |
| (ಅಜಗಣ್ಣಯ್ಯ ಸ್ವಾಮಿ) | (ಬಿ. ಬಿ. ದೊಡ್ಡಯ್ಯ) |
| ಸಹಾಯಕ ಅಭಿಯಂತರರು ಹಾಗೂ | ಮುಖ್ಯ ಅಭಿಯಂತರರು ಹಾಗೂ |
| ಸದಸ್ಯ ಕಾರ್ಯದರ್ಶಿ | ವಾರ್ಡ್ ನೋಡಲ್ ಅಧಿಕಾರಿ |
| ವಾರ್ಡ್ ಸಂಖ್ಯೆ:17 | ವಾರ್ಡ್ ಸಂಖ್ಯೆ:17 |

Scanned with CamScanner